"Rashtriya Swastya Bima Yojana" a Health Insurance Scheme of Government of India is being implemented for the benefit of unorganized workers.

ಉ) ಮನೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸಮೀಕ್ಷೆಯನ್ನು ರಾಜ್ಯದಲ್ಲಿ ಕೈಗೊಂಡಿರುವುದಿಲ್ಲ. ಈ ಕಾರ್ಮಿಕರ ಆರೋಗ್ಯ ಕಾಪಾಡಲು "ರಾಷ್ಟ್ರೀಯ ಸ್ವಾಸ್ಥ್ಯ ಬೀಮಾ ಯೋಜನೆ" ಎಂಬ ಆರೋಗ್ಯ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

The census of domestic workers has not been conducted in the State. To protect the health of these workers a Health Insurance Scheme called "Rashtriya Swastya Bima Yojana" will be implemented.

ಕಲಾ ಮತ್ತು ಸಾಂಸ್ಕೃತಿಕ ಭವನಗಳ ಮಂಜೂರಾತಿ

304 : (582)

ಶ್ರೀ ಮಾನಪ್ಪ ವಜ್ಜಲ್ (ಲಿಂಗಸುಗೂರು)

ಪ್ರಶ್ನೆ

ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನಲ್ಲಿ 2012–13ನೇ ಸಾಲಿಗೆ ಮಂಜೂರಾದ ಕಲಾಭವನಗಳು ಹಾಗೂ ಸಾಂಸ್ಕೃತಿಕ ಭವನಗಳೆಷ್ಟು;

ಆ) ಇವುಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು (ವಿವರ ನೀಡುವುದು);

ಇ) ಮಂಜೂರಾತಿಯಾಗದಿದ್ದಲ್ಲಿ, ಸದರಿ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು)?

ಶ್ರೀ ಗೋವಿಂದ ಎಂ.ಕಾರಜೋಳ (ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಉತ್ತರ

ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನಲ್ಲಿ 2012–13ನೇ ಸಾಲಿಗೆ ಒಂದು ಸಾಂಸ್ಕೃತಿಕ ಭವನಕ್ಕೆ ಅನುದಾನ ಮಂಜೂರಾಗಿದೆ.

ಆ) ಸರ್ಕಾರದ ಆದೇಶ ಸಂ:ಕಸಂವಾಪ್ರ 1034 ಕಸಧ 2012, ದಿ:03.11.2012ರಂದು ಲಿಂಗಸಗೂರು ತಾಲ್ಲೂಕು, ಅಂಕಲಿಮಠ ಇವರಿಗೆ

ರೂ.10.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು ಇವರ ಮೂಲಕ ಅನುದಾನ ಬಿಡುಗಡೆ ಮಾಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಅನುದಾನ ಮಂಜೂರಾತಿ

306 : (297)

ಶ್ರೀ ಮಂಜುನಾಥ್ ಹೆಚ್.ಪಿ (ಹುಣಸೂರು)

ಪ್ರಶ್ನೆ

ಅ) ಕರ್ನಾಟಕ ರಾಜ್ಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ;

ಆ) ಸಾಂಸ್ಕೃತಿಕ, ಐತಿಹಾಸಿಕ ಅಥವಾ ಧಾರ್ಮಿಕ ಸ್ಥಳ/ಕೇಂದ್ರಗಳ ಅಭಿವೃದ್ಧಿಗಾಗಿ ಈ ಇಲಾಖೆಯಿಂದ ಅನುದಾನ ನೀಡಲಾಗುವುದೇ;

ಇ) ಮೈಸೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಯೋಜನೆಗಳಲ್ಲಿ ಇಲಾಖೆ ವತಿಯಿಂದ ಅನುದಾನ ಮಂಜೂರು ಮಾಡಲಾಗಿದೆ?

ಶ್ರೀ ಗೋವಿಂದ ಎಂ.ಕಾರಜೋಳ (ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಉತ್ತರ

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗಿದೆ.

- ಸಂಘ/ಸಂಸ್ಥೆಗಳಿಗೆ ವಿವಿಧ ಉದ್ದೇಶ/ಕಾರ್ಯಕ್ರಮಗಳಿಗೆ ಧನಸಹಾಯ
- ಕಾರ್ಯಕ್ರಮಗಳ ಪ್ರಾಯೋಜನೆ
- ಕಲಾವಿದರಿಗೆ ವಾದ್ಯ ಪರಿಕರ ಹಾಗೂ ವೇಷಭೂಷಣ ಖರೀದಿಗೆ ಧನಸಹಾಯ
- ಪಿ.ಹೆಚ್.ಡಿ ಹಾಗೂ ಎಂ.ಫಿಲ್ ಪಡೆದಿರುವ ಬರಹಗಾರರಿಗೆ ಹಸ್ತ ಪ್ರತಿ ಮುದ್ರಣಕ್ಕೆ ಧನಸಹಾಯ
- ಸಾಂಸ್ಕೃತಿಕ ರಂಗಮಂದಿರ ನಿರ್ಮಾಣಕ್ಕೆ ಧನಸಹಾಯ